# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 479
ಸದಸ್ಯರ ಹೆಸರು : ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 10-07-2023
ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

***

| | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ನಿರಂತರ ಜ್ಯೋತಿ ಯೋಜನೆಯಡಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆಯೇ; ಇಲ್ಲದಿದ್ದಲ್ಲಿ, ಯಾವ ಯಾವ ಗ್ರಾಮಗಳಿಗೆ ಈ ಯೋಜನೆಯಡಿ ವಿದ್ಯುತ್ ಸರಬರಾಜು ವ್ಯವಸ್ಥೆ ಇನ್ನೂ ಕಲ್ಪಿಸಿರುವುದಿಲ್ಲ; ಕಲ್ಪಿಸದಿರಲು ಕಾರಣವೇನು; ಯಾವ ಕಾಲಮಿತಿಯೊಳಗೆ ಈ ಗ್ರಾಮಗಳಿಗೆ ವಿದ್ಯುತ್ ಸರಬರಾಜು ಮಾಡಲಾಗುವುದು; (ಮಾಹಿತಿ ನೀಡುವುದು) | ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ಈಗಾಗಲೇ ನಿರಂತರ ಜ್ಯೋತಿ ಯೋಜನೆಯಡಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |
| (ಆ) | ನಿರಂತರ ಜ್ಯೋತಿ ಯೋಜನೆ ಜಾರಿಗೊಂಡು ಹಲವಾರು ವರ್ಷಗಳು ಕಳೆದಿದ್ದರೂ ಸಹ ರಾಜ್ಯದ ನೂರಾರು ಗ್ರಾಮಗಳಿಗೆ ಈ ಯೋಜನೆಯಡಿ ಇನ್ನೂ ವಿದ್ಯುತ್ ಸರಬರಾಜು ವ್ಯವಸ್ಥೆ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಗ್ರಾಮಗಳಿಗೆ ವಿದ್ಯುತ್ ಸರಬರಾಜು ಮಾಡಲಾಗುವುದು? (ವಿವರ ನೀಡುವುದು) | ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳಾದ ಬೆಸ್ಕಾಂ, ಸೆಸ್ಕ್, ಹೆಸ್ಕಾಂ ಮತ್ತು ಜೆಸ್ಕಾಂಗಳ ವ್ಯಾಪ್ತಿಯಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಅವುಗಳ ವಿವರಗಳು ಕೆಳಕಂಡಂತಿವೆ:-<br><br>**<u>ಬೆಸ್ಕಾಂ :</u>**<br>ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಿಗೂ ಈಗಾಗಲೇ ನಿರಂತರ ಜ್ಯೋತಿ ಯೋಜನೆಯಡಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.<br><br>**<u>ಸೆಸ್ಕ್ :-</u>**<br>ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವ್ಯಾಪ್ತಿಯ ನಿರಂತರ ಜ್ಯೋತಿ ಹಾಗೂ ಡಿ.ಡಿ.ಯು.ಜಿ.ಜೆ.ವೈ ಯೋಜನೆಯಡಿಯಲ್ಲಿ 419 ಫೀಡರ್‌ಗಳಲ್ಲಿ 8617 ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಸದರಿ ಯೋಜನೆಗಳಲ್ಲಿ ಬಿಟ್ಟು ಹೋಗಿರುವ 217 ಗ್ರಾಮಗಳಿಗೆ ನಿರಂತರ ವಿದ್ಯುತ್ ಪೂರೈಸಲು ಪೂರ್ಣ ಗುತ್ತಿಗೆ ಆಧಾರದಡಿ ಕಾರ್ಯಪ್ರೇಷಣೆಗಳನ್ನು ನೀಡಲಾಗಿದ್ದು ಆದ್ಯತೆ ಮೇರೆಗೆ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುವುದು. |

...2

**<u>ಹೆಸ್ಕಾಂ:</u>**

ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ 6 ಜಿಲ್ಲೆಗಳ (ಧಾರವಾಡ, ಗದಗ, ಹಾವೇರಿ, ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ) ಗ್ರಾಮಗಳಿಗೆ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುತ್ತದೆ.

ಮುಂದುವರೆದು ಉತ್ತರ ಕನ್ನಡ ಜಿಲ್ಲೆಯಲ್ಲಿ ಈಗಾಗಲೇ ನಿರಂತರ ವಿದ್ಯುತ್ ಪೂರೈಕೆ ಮಾಡುತ್ತಿರುವುದರಿಂದ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಿರುವುದಿಲ್ಲ.

**<u>ಜೆಸ್ಕಾಂ:</u>**

ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯಲ್ಲಿ ಒಟ್ಟು 4116 ಗ್ರಾಮಗಳಿದ್ದು, ಅವುಗಳ ಪೈಕಿ 4057 ಗ್ರಾಮಗಳಿಗೆ ನಿರಂತರ ಜ್ಯೋತಿ ಯೋಜನೆಯಡಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಉಳಿದ 59 ಗ್ರಾಮಗಳಿಗೆ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸಲು Revamped Distribution Sector Scheme (RDSS) ಯೋಜನೆಯ ಪ್ರಸ್ತಾವನೆಯಲ್ಲಿ ಸೇರಿಸಲಾಗಿದೆ.

**<u>ಮೆಸ್ಕಾಂ :</u>**

ಮೆಸ್ಕಾಂ ವ್ಯಾಪ್ತಿಯಲ್ಲಿ 'ನಿರಂತರ ಜ್ಯೋತಿ' ಯೋಜನೆಯನ್ನು ಅನುಷ್ಠಾನಗೊಳಿಸಿರುವುದಿಲ್ಲ.

ಆದಾಗ್ಯೂ, ಕೇಂದ್ರ ಸರ್ಕಾರದ ದೀನ ದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆಯಡಿ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಗ್ರಾಮೀಣ ಫೀಡರ್ ಗಳಲ್ಲಿ ಕೃಷಿ ಹಾಗೂ ಕೃಷಿಯೇತರ ಸ್ಥಾವರಗಳನ್ನು ಬೇರ್ಪಡಿಸಲು 'ಫೀಡರ್ ಬೇರ್ಪಡಿಸುವಿಕೆ' ಕಾಮಗಾರಿಯನ್ನು ಒಟ್ಟು 1289 ಗ್ರಾಮಗಳಲ್ಲಿ ಅನುಷ್ಠಾನಗೊಳಿಸಲಾಗಿದೆ

ಅಲ್ಲದೆ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿಯೂ ಭೌಗೋಳಿಕ ಹಾಗೂ ತಾಂತ್ರಿಕ ಕಾರಣದಿಂದಾಗಿ 'ಫೀಡರ್ ಬೇರ್ಪಡಿಸುವಿಕೆ' ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದಿಲ್ಲ. ಆದಾಗ್ಯೂ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ಗ್ರಾಮೀಣ ಪ್ರದೇಶದಲ್ಲಿನ ಗ್ರಾಮಗಳಿಗೆ ದಿನವಹಿ ಸರಾಸರಿ 22:48 ಗಂಟೆಗಳ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಸಂಖ್ಯೆ: ಎನರ್ಜಿ 131 ಇಬಿಎಸ್ 2023

(ಕೆ.ಜೆ.ಜಾರ್ಜ್)
ಇಂಧನ ಸಚಿವರು